ರಾಯಚೂರು ವಿಶ್ವವಿದ್ಯಾಲಯ RAICHUR UNIVERSITY
ಯರಗೇರಾ-584133, ರಾಯಚೂರು, ಕರ್ನಾಟಕ ರಾಜ್ಯ, ಭಾರತ
Office No.+91 9141030953 ಪರೀಕ್ಷಾ ವಿಭಾಗ E-mail: **registrarevrur@gmail.com**

ಸಂಖ್ಯೆ: ರಾವಿರಾ/ಪರೀಕ್ಷಾ/ಯು.ಜಿ/ಮರುಮೌಲ್ಯಮಾಪನ/2023-24/738 ದಿನಾಂಕ: 14.02.2024

## ಪರಿಷ್ಕೃತ ಮರುಮೌಲ್ಯಮಾಪನ ಅಧಿಸೂಚನೆ

**ವಿಷಯ:** 2022-23 ನೇ ಸಾಲಿನ ಸ್ನಾತಕ(UG) ಪ್ರಥಮ ಸೆಮಿಸ್ಟರ್‌ನ ನಕಲು ಪ್ರತಿ ಮತ್ತು ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸುವ ಕುರಿತು.

**ಉಲ್ಲೇಖ:** 1. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:12.01.2024
2. ಸಂಖ್ಯೆ/ರಾವಿರಾ/ಪರೀಕ್ಷಾ/ಯು.ಜಿ/ಮರುಮೌಲ್ಯಮಾಪನ/2023-24/691 ದಿನಾಂಕ 26.01.2024
3. ಸಂಖ್ಯೆ/ರಾವಿರಾ/ಪರೀಕ್ಷಾ/ಯು.ಜಿ/ಮರುಮೌಲ್ಯಮಾಪನ/2023-24/704 ದಿನಾಂಕ 31.01.2024

*****

ಮೇಲ್ಕಾಣಿಸಿದ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ರಾಯಚೂರು ವಿಶ್ವವಿದ್ಯಾಲಯದ ಅಧೀನದಲ್ಲಿ ಬರುವಂತಹ ರಾಯಚೂರು ಹಾಗೂ ಯಾದಗಿರಿ ಜಿಲ್ಲೆಗಳಲ್ಲಿರುವ ಎಲ್ಲಾ ಪದವಿ ಮಹಾವಿದ್ಯಾಲಯಗಳ ಪ್ರಾಂಶುಪಾಲರುಗಳಿಗೆ ಈ ಮೂಲಕ ತಿಳಿಸುವುದೇನೆಂದರೆ, ಎಲ್ಲಾ 2022-23 ನೇ ಸಾಲಿನ ಸ್ನಾತಕ(UG) ಕೋರ್ಸಗಳ ಪ್ರಥಮ ಸೆಮಿಸ್ಟರ್‌ನ ಪರೀಕ್ಷಾ ಫಲಿತಾಂಶವನ್ನು ಈಗಾಗಲೇ UUCMS ನಲ್ಲಿ ಪ್ರಕಟಿಸಲಾಗಿದೆ. ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನದ ಅರ್ಜಿಗಳನ್ನು ಸಲ್ಲಿಸುವ ವಿದ್ಯಾರ್ಥಿಗಳು ತಮ್ಮ UUCMS ಪೋರ್ಟಲ್ ಮುಖಾಂತರ ಅರ್ಜಿಗಳನ್ನು ಹಾಗೂ ಶುಲ್ಕವನ್ನು ಭರಿಸಿ ತಮ್ಮ ಮಹಾವಿದ್ಯಾಲಯದ ಪ್ರಾಂಶುಪಾಲರುಗಳ ಮುಖಾಂತರ ವಿಶ್ವವಿದ್ಯಾಲಯಕ್ಕೆ ಸಲ್ಲಿಸಲು ಈ ಮೂಲಕ ಸೂಚಿಸಲಾಗಿದೆ.

ಮರುಮೌಲ್ಯಮಾಪನಕ್ಕೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವವರು ಈ ಕೆಳಗೆ ನಮೂದಿಸಿದಂತೆ ದಿನಾಂಕ ಒಳಗೆ ಅರ್ಜಿಗಳನ್ನು ಸಲ್ಲಿಸಬೇಕು. ಎಲ್ಲಾ ಪ್ರಾಂಶುಪಾಲರು ಈ ಅಧಿಸೂಚನೆಯ ಪ್ರತಿಯನ್ನು ಸೂಚನಾ ಫಲಕಕ್ಕೆ ಪ್ರಕಟಿಸಬೇಕಾಗಿ ಈ ಮೂಲಕ ಸೂಚಿಸಲಾಗಿದೆ.

| ಕೋರ್ಸ್ | ಫೋಟೋ ಪ್ರತಿ | | ಮರುಮೌಲ್ಯಮಾಪನ | |
|---|---|---|---|---|
| ಬಿ.ಎ/ಬಿ.ಕಾಂ./ಬಿ.ಎಸ್ಸಿ/ಬಿ.ಸಿ.ಎ./ಬಿ.ಬಿ.ಎ. | ಆರಂಭದ ದಿನಾಂಕ | ಕೊನೆಯ ದಿನಾಂಕ | ಆರಂಭದ ದಿನಾಂಕ | ಕೊನೆಯ ದಿನಾಂಕ |
| | 14.02.2024 | 15.02.2024 | 16.02.2024 | 17.02.2024 |

**ವಿಶೇಷ ಸೂಚನೆ:** ಕೊನೆಯ ದಿನಾಂಕ ಮುಗಿದ ಎರಡು ದಿನಗಳೊಳಗಾಗಿ ಆಯಾ ಕಾಲೇಜಿನ ಪ್ರಾಚಾರ್ಯರು ಎಲ್ಲ ವಿದ್ಯಾರ್ಥಿಗಳಿಂದ ಮಾಹಿತಿಯನ್ನು ಪಡೆದು ಕ್ರೋಡಿಕರಿಸಿ ಕುಲಸಚಿವರು(ಮೌಲ್ಯಮಾಪನ), ಪರೀಕ್ಷಾ ವಿಭಾಗ, ರಾಯಚೂರು ವಿಶ್ವವಿದ್ಯಾಲಯ, ರಾಯಚೂರು ಇವರ ಕಾರ್ಯಾಲಯಕ್ಕೆ ಸಲ್ಲಿಸತಕ್ಕದ್ದು.

(ಪ್ರೊ. ಯರಿಸ್ವಾಮಿ ಎಂ.)
ಕುಲಸಚಿವರು (ಮೌಲ್ಯಮಾಪನ)
ರಾಯಚೂರು ವಿಶ್ವವಿದ್ಯಾಲಯ, ರಾಯಚೂರು

**ಗೆ,**
ರಾಯಚೂರು ವಿಶ್ವವಿದ್ಯಾಲಯ ವ್ಯಾಪ್ತಿಯ ಸಂಲಗ್ನತೆ ಹೊಂದಿದ ಎಲ್ಲಾ ಪದವಿ ಮಹಾವಿದ್ಯಾಲಯಗಳ ಪ್ರಾಂಶುಪಾಲರುಗಳಿಗೆ, ಸದರಿ ವಿಷಯವನ್ನು ವಿದ್ಯಾರ್ಥಿಗಳ ಗಮನಕ್ಕೆ ತರಲು ಸೂಚಿಸಿದೆ.

**ಪ್ರತಿಗಳು:**
1. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿ/ಕುಲಸಚಿವರು ಅವರ ಆಪ್ತ ಸಹಾಯಕರು, ರಾಯಚೂರು ವಿಶ್ವವಿದ್ಯಾಲಯ, ರಾಯಚೂರು.
2. ಹಣಕಾಸು ಅಧಿಕಾರಿಗಳು, ರಾಯಚೂರು ವಿಶ್ವವಿದ್ಯಾಲಯ, ರಾಯಚೂರು.
3. ನಿರ್ದೇಶಕರು, ಕಾಲೇಜು ಅಭಿವೃದ್ಧಿ ಮಂಡಳಿ, ರಾಯಚೂರು ವಿಶ್ವವಿದ್ಯಾಲಯ, ರಾಯಚೂರು.
4. ಶೈಕ್ಷಣಿಕ ವಿಭಾಗ, ರಾಯಚೂರು ವಿಶ್ವವಿದ್ಯಾಲಯ, ರಾಯಚೂರು.
5. ಕಛೇರಿ ಪ್ರತಿ.